**All India Radio: Bangalore**
**National Bulletin In Kannada**
**05.11.2025 19.35 p.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**05.11.2025 19.35 p.m.**
*******************

ಮುಖ್ಯಾಂಶಗಳು

೧. ಮೊದಲ ಹಂತದಲ್ಲಿ ಬಿಹಾರ ವಿಧಾನಸಭೆಯ ೧೨೧ ಕ್ಷೇತ್ರಗಳಿಗೆ ನಾಳೆ ಮತದಾನ

೨. ಅಕ್ಲೆಂಡ್‌ನಲ್ಲಿಂದು ನ್ಯೂಜಿಲೆಂಡ್ ವಾಣಿಜ್ಯ ಸಚಿವರೊಂದಿಗೆ ಕೇಂದ್ರ ಸಚಿವ ಪಿಯೂಶ್ ಗೋಯಲ್ ಮಾತುಕತೆ

೩. ಕೊಚ್ಚಿಯ ನೌಕಾ ನೆಲೆಯಲ್ಲಿ ಭಾರತೀಯ ನೌಕಾಪಡೆಗೆ ನಾಳೆ ಇಕ್ಷಾಕ್ ಹಡಗು ಸೇರ್ಪಡೆ

೪. ನವದೆಹಲಿಯಲ್ಲಿ ಇದೇ ೧೧ ರಿಂದ ಅಂತಾರಾಷ್ಟ್ರೀಯ ಹಸಿರು ಹೈಡ್ರೋಜನ್ ಸಮ್ಮೇಳನ

***************

ಬಿಹಾರದ ೧೮ ಜಿಲ್ಲೆಗಳ ೧೨೧ ವಿಧಾನಸಭಾ ಕ್ಷೇತ್ರಗಳಿಗೆ ಮೊದಲ ಹಂತದ ಮತದಾನ ನಾಳೆ ನಡೆಯಲಿದೆ.

ಮುಕ್ತ, ನ್ಯಾಯಸಮ್ಮತ ಮತ್ತು ಶಾಂತಿಯುತ ಮತದಾನವನ್ನು ಖಚಿತಪಡಿಸಿಕೊಳ್ಳಲು ವ್ಯಾಪಕ ಭದ್ರತಾ ವ್ಯವಸ್ಥೆಗಳನ್ನು ಮಾಡಲಾಗಿದೆ. ಮತದಾನ ಬೆಳಗ್ಗೆ ೭ ಗಂಟೆಗೆ ಪ್ರಾರಂಭವಾಗಿ ಸಂಜೆ ೬ ಗಂಟೆಗೆ ಕೊನೆಗೊಳ್ಳುತ್ತದೆ.

ಆದರೆ, ಭದ್ರತಾ ಕಾರಣಗಳಿಂದಾಗಿ, ಸಿಮ್ರಿ ಭಕ್ತಿಯಾರ್ಪುರ, ಮಹಿಶಿ, ತಾರಾಪುರ್, ಮುಂಗೇರ್, ಜಮಾಲ್ಪುರ ಮತ್ತು ಸೂರ್ಯಗಢ ವಿಧಾನಸಭಾ ಕ್ಷೇತ್ರದ ೫೬ ಮತಗಟ್ಟೆಗಳಲ್ಲಿ ಮತದಾನದ ಸಮಯವನ್ನು ಸಂಜೆ ೫ ಕ್ಕೆ ಮೊಟಕುಗೊಳಿಸಲಾಗುತ್ತದೆ.

ಈ ಹಂತದಲ್ಲಿ, ಒಟ್ಟು ೧,೩೧೪ ಅಭ್ಯರ್ಥಿಗಳ ರಾಜಕೀಯ ಭವಿಷ್ಯವನ್ನು ೩.೭೫ ಕೋಟಿಗೂ ಹೆಚ್ಚು ಮತದಾರರು ನಿರ್ಧರಿಸಲಿದ್ದಾರೆ.

***************

ಛತ್ತೀಸ್‌ಗಢದ ನವರಾಯಪುರದಲ್ಲಿ ಇಂದು ನಡೆದ ಭಾರತೀಯ ವಾಯುಪಡೆಯ ಸೂರ್ಯಕಿರಣ್ ಏರೋಬ್ಯಾಟಿಕ್ ತಂಡದ ಅದ್ಭುತ ವೈಮಾನಿಕ ಪ್ರದರ್ಶನವನ್ನು ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ವೀಕ್ಷಿಸಿದರು.

ಛತ್ತೀಸ್‌ಗಢ ರಾಜ್ಯ ರಚನೆಯ ೨೫ನೇ ವಾರ್ಷಿಕೋತ್ಸವವನ್ನು ಗುರುತಿಸಲು ಆಯೋಜಿಸಿರುವ ಛತ್ತೀಸ್‌ಗಢದ ರಜತ ಮಹೋತ್ಸವ ಆಚರಣೆಯ ಭಾಗವಾಗಿ ಈ ವೈಮಾನಿಕ ಪ್ರದರ್ಶನವನ್ನು ಏರ್ಪಡಿಸಲಾಗಿತ್ತು.

ನವರಾಯಪುರದ ಸೆಂಧ್ ಸರೋವರದ ಬಳಿ ಸಾವಿರಾರು ಜನರು ಜಮಾಯಿಸಿ, ಈ ವೈಮಾನಿಕ ಪ್ರದರ್ಶನವನ್ನು ವೀಕ್ಷಿಸಿದರು. ಈ ವೇಳೆ, ಛತ್ತೀಸ್‌ಗಢ ರಾಜ್ಯಪಾಲ ರಾಮೆನ್ ದೇಕಾ, ಮುಖ್ಯಮಂತ್ರಿ ವಿಷ್ಣು ದಿಯೊ ಸಾಯಿ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.

***************

ಅಕ್ಲೆಂಡ್‌ನಲ್ಲಿಂದು ಭಾರತ-ನ್ಯೂಜಿಲೆಂಡ್ ವ್ಯಾಪಾರ ವೇದಿಕೆಯಲ್ಲಿ ನ್ಯೂಜಿಲೆಂಡ್ ವಾಣಿಜ್ಯ ಸಚಿವ ಟಾಡ್ ಮೆಕ್ಲೆ ಅವರನ್ನು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಶ್ ಗೋಯಲ್ ಭೇಟಿಯಾಗಿ ಮಾತುಕತೆ ನಡೆಸಿದರು.

ಸಮುದ್ರಯಾನ, ರಕ್ಷಣೆ, ಶಿಕ್ಷಣ, ಪ್ರವಾಸೋದ್ಯಮ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಉಭಯ ದೇಶಗಳ ನಡುವಿನ ಸಹಕಾರವನ್ನು ಮತ್ತುಷ್ಟು ಬಲಗೊಳಿಸುವ ನಿಟ್ಟಿನಲ್ಲಿ ನಾಯಕರು ಚರ್ಚಿಸಿದರು.

ನಂತರ ಭಾರತೀಯ ಸಮುದಾಯವನ್ನು ಉದ್ದೇಶಿಸಿ ಮಾತನಾಡಿದ ಸಚಿವ ಪಿಯೂಶ್ ಗೋಯಲ್, ತೆರಿಗೆ ಹೊರೆಯನ್ನು ಕಡಿಮೆ ಮಾಡುವ ಮೂಲಕ ಮತ್ತು ಕೆಂಪುಪಟ್ಟಿಯನ್ನು ತೆಗೆದು ಹಾಕುವ ಮೂಲಕ ವ್ಯವಹಾರವನ್ನು ಸುಲಭಗೊಳಿಸಲು ಭಾರತ ಸರ್ಕಾರ ಕೆಲಸ ಮಾಡುತ್ತಿದೆ ಎಂದು ಹೇಳಿದರು.

ಧ್ವನಿ: ಪಿಯೂಶ್ ಗೋಯಲ್ ೩೭ ಸೆಕೆಂಡ್

***************

ಇಪ್ಪತ್ತೈದು ಲಕ್ಷಕ್ಕೂ ಹೆಚ್ಚು ಜನರು ತಮ್ಮ ಡಿಜಿಟಲ್ ಲೈಫ್ ಪ್ರಮಾಣ ಪತ್ರವನ್ನು ರಚಿಸಲು ಮುಖ ದೃಢೀಕರಣ ಸೌಲಭ್ಯವನ್ನು ಅಳವಡಿಸಿಕೊಂಡಿದ್ದಾರೆ ಎಂದು ಕೇಂದ್ರ ಸಿಬ್ಬಂದಿ, ಸಾರ್ವಜನಿಕ ಕುಂದು-ಕೊರತೆ ಮತ್ತು ಪಿಂಚಣಿ ಖಾತೆ ರಾಜ್ಯ ಸಚಿವ ಡಾ.ಜಿತೇಂದ್ರ ಸಿಂಗ್ ತಿಳಿಸಿದ್ದಾರೆ.

ನವದೆಹಲಿಯಲ್ಲಿಂದು ನಡೆದ ೪ನೇ ರಾಷ್ಟ್ರವ್ಯಾಪಿ ಡಿಜಿಟಲ್ ಲೈಫ್ ಪ್ರಮಾಣ ಪತ್ರ ಅಭಿಯಾನದ ಉದ್ಘಾಟನಾ ಸಮಾರಂಭ ಉದ್ದೇಶಿಸಿ ಮಾತನಾಡಿದ ಅವರು, ಈ ಉಪಕ್ರಮವು ಮಂಗೋಲಿಯಾ, ಮಾಲ್ಡಿವೀಸ್ ಸೇರಿದಂತೆ ವಿದೇಶಗಳಿಂದ ಪ್ರಶಂಸೆಗಳಿಸಿದೆ ಎಂದು ಹೇಳಿದರು.

ಈ ಅಭಿಯಾನ ಈ ತಿಂಗಳ ಅಂತ್ಯದವರೆಗೆ ನಡೆಯಲಿದೆ ಎಂದು ಮಾಹಿತಿ ನೀಡಿದ ಸಚಿವ ಡಾ. ಜಿತೇಂದ್ರ ಸಿಂಗ್, ಅಭಿಯಾನದ ಕುರಿತು ಕಿರುಪುಸ್ತಕ ಮತ್ತು ಕಿರುಚಿತ್ರವನ್ನು ಬಿಡುಗಡೆಗೊಳಿಸಿದರು.

***************

ಬಿಜೆಪಿ ಮತ್ತು ಚುನಾವಣಾ ಆಯೋಗದ ವಿರುದ್ಧ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಮಾಡಿರುವ ಮತಗಳ್ಳತನ ಆರೋಪವನ್ನು ಬಿಜೆಪಿ ಹಿರಿಯ ನಾಯಕ ಮತ್ತು ಕೇಂದ್ರ ಸಚಿವ ಕಿರಣ್ ರಿಜಿಜು ಟೀಕಿಸಿದ್ದಾರೆ.

ಈ ಕುರಿತು ನವದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವ ಕಿರಣ್ ರಿಜಿಜು, ಫಲಿತಾಂಶಗಳು ಕಾಂಗ್ರೆಸ್ ಪರವಾಗಿ ಬರದಿದ್ದಾಗ ರಾಹುಲ್ ಗಾಂಧಿ ಅವರು ಚುನಾವಣಾ ಆಯೋಗ ಮತ್ತು ಇವಿಎಂ ಗಳನ್ನು ದೂಷಿಸುತ್ತಾರೆ ಎಂದು ಹೇಳಿದರು.

ಮತದಾರರ ಪಟ್ಟಿಯಲ್ಲಿ ಯಾವುದೇ ದೋಷಗಳಿದ್ದರೆ, ಚುನಾವಣಾ ಆಯೋಗಕ್ಕೆ ಕಾಂಗ್ರೆಸ್ ದೂರು ನೀಡಬೇಕು ಎಂದು ಸಚಿವ ಕಿರಣ್ ರಿಜಿಜು ಒತ್ತಾಯಿಸಿದರು.

ಇನ್ನೊಂದೆಡೆ, ಕಾಂಗ್ರೆಸ್ ಹಿರಿಯ ನಾಯಕ ಮತ್ತು ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಮಾತನಾಡಿ, ಹರಿಯಾಣ ವಿಧಾನಸಭಾ ಚುನಾವಣೆಯಲ್ಲಿ ದೊಡ್ಡ ಪ್ರಮಾಣದ ಚುನಾವಣಾ ಅಕ್ರಮ ನಡೆದಿದೆ ಎಂದು ಆರೋಪಿಸಿದ ಅವರು, ಈ ಸಂಬಂಧ ಬಿಜೆಪಿ ಮತ್ತು ಚುನಾವಣಾ ಆಯೋಗವನ್ನು ಟೀಕಿಸಿದರು.

***************

ಕೊಚ್ಚಿಯ ನೌಕಾ ನೆಲೆಯಲ್ಲಿ ನಾಳೆ ಇಕ್ಷಾಕ್ ಹಡಗು ಅಧಿಕೃತವಾಗಿ ಭಾರತೀಯ ನೌಕಾಪಡೆಗೆ ಸೇರ್ಪಡೆಯಾಗಲಿದೆ. ಭಾರತೀಯ ನೌಕಾಪಡೆಯ ಮುಖ್ಯಸ್ಥ ಅಡ್ಮಿರಲ್ ದಿನೇಶ್ ಕೆ. ತ್ರಿಪಾಠಿ ಅವರ ಸಮ್ಮುಖದಲ್ಲಿ ಸೇರ್ಪಡೆ ಸಮಾರಂಭ ನಡೆಯಲಿದೆ.

ಈ ಹಡಗಿನ ಸೇರ್ಪಡೆಯೊಂದಿಗೆ ಭಾರತೀಯ ನೌಕಾಪಡೆಯ ಸಾಮರ್ಥ್ಯ ಮತ್ತಷ್ಟು ವೃದ್ಧಿಯಾಗಲಿದೆ. ಇಕ್ಷಾಕ್ ಹಡಗನ್ನು ದೇಶೀಯವಾಗಿ ನಿರ್ಮಿಸಲಾಗಿದೆ. ಇಕ್ಷಾಕ್ ಎಂದರೆ ಸಂಸ್ಕೃತದಲ್ಲಿ ಮಾರ್ಗದರ್ಶಿ ಎಂಬ ಅರ್ಥವಿದೆ. ಬಂದರುಗಳು, ಕರಾವಳಿ ಮತ್ತು ಆಳ ನೀರಿನ ಹೈಡ್ರೊಗ್ರಾಫಿಕ್ ಸಮೀಕ್ಷೆಗಳನ್ನು ಕೈಗೊಳ್ಳಲು ಈ ಹಡಗನ್ನು ವಿನ್ಯಾಸಗೊಳಿಸಲಾಗಿದೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ.

ಸಮುದ್ರದಲ್ಲಿ ಸುರಕ್ಷಿತ ಸಂಚಾರವನ್ನು ಖಚಿತಪಡಿಸಿಕೊಳ್ಳಲು ಮತ್ತು ಕಡಲ ಸುರಕ್ಷತೆಯನ್ನು ಬಲಪಡಿಸಲು ಈ ರೀತಿಯ ದತ್ತಾಂಶದ ಅಗತ್ಯವಿರುತ್ತದೆ.

***************

ಕೇಂದ್ರ ನವ ಮತ್ತು ನವೀಕರಿಸಬಹುದಾದ ಇಂಧನ ಸಚಿವಾಲಯ ಈ ತಿಂಗಳ ೧೧ ಮತ್ತು ೧೨ ರಂದು ನವದೆಹಲಿಯಲ್ಲಿ ಅಂತಾರಾಷ್ಟ್ರೀಯ ಹಸಿರು ಹೈಡ್ರೋಜನ್ ಸಮ್ಮೇಳನ ಆಯೋಜಿಸಲಿದೆ.

ಹಸಿರು ಹೈಡ್ರೋಜನ್ ಉತ್ಪಾದನೆ ಹೆಚ್ಚಿಸಲು, ಮೂಲಸೌಕರ್ಯ ಸಕ್ರಿಯಗೊಳಿಸಲು, ಬೇಡಿಕೆ ಹೆಚ್ಚಿಸಲು ಮತ್ತು ಜಾಗತಿಕ ಸಹಯೋಗ ಉತ್ತೇಜಿಸಲು ಪ್ರಾಯೋಗಿಕ ಮಾರ್ಗಗಳ ಕುರಿತು ಚರ್ಚಿಸುವುದು ಈ ಸಮ್ಮೇಳನದ ಗುರಿಯಾಗಿದೆ.

ಕೇಂದ್ರ ನವ ಮತ್ತು ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ್ ಜೋಶಿ, ಪೆಟ್ರೋಲಿಯಂ ಮತ್ತು ಅನಿಲ ಸಚಿವ ಹರ್ದೀಪ್ ಸಿಂಗ್ ಪುರಿ ಮತ್ತು ಕೇಂದ್ರ ಭೂವಿಜ್ಞಾನ ರಾಜ್ಯ ಸಚಿವ ಡಾ.ಜಿತೇಂದ್ರ ಸಿಂಗ್ ಹಾಗೂ ವಿವಿಧ ಸಚಿವಾಲಯಗಳು ಮತ್ತು ಅಂತಾರಾಷ್ಟ್ರೀಯ ನಿಯೋಗಗಳ ಪ್ರತಿನಿಧಿಗಳು ಸಮ್ಮೇಳನದಲ್ಲಿ ಭಾಗವಹಿಸಲಿದ್ದಾರೆ.

ಸಮ್ಮೇಳನದ ಸಮಯದಲ್ಲಿ ನಡೆಯುವ ಅಧಿವೇಶನಗಳು ಹಣಕಾಸು, ಬಂದರು ಸಿದ್ಧತೆ, ಕೌಶಲ್ಯಾಭಿವೃದ್ಧಿ ಮತ್ತು ತಂತ್ರಜ್ಞಾನಗಳ ದೇಶೀಕರಣದ ಮೇಲೆ ಕೇಂದ್ರೀಕರಿಸುತ್ತದೆ.

***************

ದೇಶಭಕ್ತಿ ಗೀತೆ ವಂದೇ ಮಾತರಂನ ೧೫೦ನೇ ವಾರ್ಷಿಕೋತ್ಸವದ ಸ್ಮರಣಾರ್ಥ ಬಿಜೆಪಿ ಇದೇ ಶುಕ್ರವಾರ ದೇಶಾದ್ಯಂತ ೧೫೦ ಸ್ಥಳಗಳಲ್ಲಿ ವಿಶೇಷ ಕಾರ್ಯಕ್ರಮವನ್ನು ಆಯೋಜಿಸಿದೆ.

ನವದೆಹಲಿಯಲ್ಲಿ ಈ ಕುರಿತು ಮಾಹಿತಿ ನೀಡಿದ ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ತರುಣ್ ಚುಗ್, ರಾಷ್ಟ್ರೀಯ ಗೀತೆ ವಂದೇ ಮಾತರಂನ ೧೫೦ನೇ ವಾರ್ಷಿಕೋತ್ಸವವನ್ನು ಉತ್ಸವವಾಗಿ ಆಚರಿಸಲು ಕೇಂದ್ರ ಸಚಿವ ಸಂಪುಟ ನಿರ್ಧರಿಸಿದೆ.

ಈ ತಿಂಗಳ ೨೬ ರಂದು ಆಚರಿಸಲಾಗುವ ಸಂವಿಧಾನ ದಿನದವರೆಗೆ ವಂದೇ ಮಾತರಂ ಕಾರ್ಯಕ್ರಮಗಳನ್ನು ಬಿಜೆಪಿ ಆಯೋಜಿಸಲಿದೆ ಎಂದು ತಿಳಿಸಿದ್ದಾರೆ. ವಂದೇ ಮಾತರಂ ಹಾಡು- ರಾಷ್ಟ್ರೀಯತೆ, ಏಕತೆ ಮತ್ತು ಬ್ರಿಟಿಷ್ ಆಳ್ವಿಕೆಯ ವಿರುದ್ಧದ ಪ್ರತಿರೋಧದ ಸಾಮೂಹಿಕ ಮನೋಭಾವದ ಸ್ಫೂರ್ತಿದಾಯಕ ಸಂಕೇತವಾಗಿದೆ ಎಂದು ಅವರು ಹೇಳಿದ್ದಾರೆ.

***************

ಉತ್ತರ ಪ್ರದೇಶ ಮಿರ್ಜಾಪುರದ ಚುನಾರ್ ರೈಲು ನಿಲ್ದಾಣದಲ್ಲಿ ಇಂದು ಬೆಳಗ್ಗೆ ರೈಲು ಹಳಿ ದಾಟುತ್ತಿದ್ದಾಗ ರೈಲೊಂದು ಡಿಕ್ಕಿ ಹೊಡೆದ ಪರಿಣಾಮ ೬ ಯಾತ್ರಿಕರು ಸಾವನ್ನಪ್ಪಿದ್ದಾರೆ.

ಕಾರ್ತಿಕ ಪೂರ್ಣಿಮೆಯ ಪವಿತ್ರ ಸ್ನಾನಕ್ಕಾಗಿ ಯಾತ್ರಿಕರನ್ನು ಕರೆದೊಯ್ಯುತ್ತಿದ್ದ ಗೋಮೊಹ್-ಪ್ರಯಾಗ್‌ರಾಜ್-ಬರ್ವಾಡಿ ಪ್ಯಾಸೆಂಜರ್ ರೈಲು ಸೋನಭದ್ರದಿಂದ ಬೆಳಗ್ಗೆ ೯.೧೫ರ ಸುಮಾರಿಗೆ ಫ್ಲಾಟ್‌ಪಾರಂ ಸಂಖ್ಯೆ ೪ಕ್ಕೆ ಬಂದಿತು. ಫ್ಲಾಟ್‌ಪಾರಂ ಸಂಖ್ಯೆ ೪ರಲ್ಲಿ ಪ್ರಯಾಣಿಕರು ಇಳಿಯುವ ಬದಲು, ಎದುರು ಬದಿಯಲ್ಲಿ ಇಳಿದು ಫ್ಲಾಟ್‌ಪಾರಂ ಸಂಖ್ಯೆ ೩ ಅನ್ನು ತಲುಪಲು ಹಳಿಗಳನ್ನು ದಾಟಲು ಪ್ರಯತ್ನಿಸಿದರು. ಈ ವೇಳೆ ಫ್ಲಾಟ್‌ಪಾರಂ ಸಂಖ್ಯೆ ೩ ರಲ್ಲಿ ಹಾದುಹೋಗುತ್ತಿದ್ದ ಕಲ್ಕಾ-ಹೌರಾ ಮೇಲ್ ರೈಲು ಡಿಕ್ಕಿ ಹೊಡೆದಿದೆ ಎಂದು ಜಿಲ್ಲಾಧಿಕಾರಿ ಪವನ್ ಕುಮಾರ್ ಗಂಗ್‌ವಾರ್ ಮಾಹಿತಿ ನೀಡಿದ್ದಾರೆ.

ಘಟನೆ ಹಿನ್ನೆಲೆಯಲ್ಲಿ ಮೃತ ಕುಟುಂಬಗಳಿಗೆ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಸಂತಾಪ ಸೂಚಿಸಿದ್ದು, ಕೂಡಲೇ ಪರಿಹಾರ ಕಾರ್ಯಚರಣೆಯನ್ನು ತ್ವರಿತಗೊಳಿಸುವಂತೆ ಹಾಗೂ ಗಾಯಾಳುಗಳಿಗೆ ಸೂಕ್ತ ಚಿಕಿತ್ಸೆ ನೀಡುವಂತೆ ನಿರ್ದೇಶನ ನೀಡಿದ್ದಾರೆ.

***************

ಇಂದು ಗುರುನಾನಕ್ ಜಯಂತಿ. ಗುರುಪುರಬ್ ಎಂದೂ ಕರೆಯಲ್ಪಡುವ ಗುರುನಾನಕ್ ಜಯಂತಿಯನ್ನು ದೇಶಾದ್ಯಂತ ಆಚರಿಸಲಾಯಿತು,

ಹತ್ತು ಗುರುಗಳಲ್ಲಿ ಮೊದಲನೆಯವರಾದ ಮತ್ತು ಸಿಖ್ ಧರ್ಮದ ಸಂಸ್ಥಾಪಕರಾದ ಗುರುನಾನಕ್ ದೇವ್ ಅವರ ೫೫೬ ನೇ ಜನ್ಮ ದಿನಾಚರಣೆಯನ್ನು ಆಚರಿಸಲಾಯಿತು.

********ಮುಕ್ತಾಯ*******